## ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
## KARNATAKA LEGISLATIVE ASSEMBLY, RESEARCH AND REFERENCE BRANCH

### ಪತ್ರಿಕಾ ತುಣುಕುಗಳು
### PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ______ ದಿನಾಂಕ : DATE : 13/2/21

# ಮಾದರಿ ವಿಧಾನ ಪರಿಷತ್ತನ್ನಾಗಿ ಮಾಡಲು ಶ್ರಮಿಸುವೆ: ಹೊರಟ್ಟಿ



ವಿಪ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಿದ್ದಲಿಂಗ ಸ್ವಾಮೀಜಿ ಯವರ ಆಶೀರ್ವಾದ ಪಡೆದರು.

**ತುಮಕೂರು:** ಕರ್ನಾಟಕ ವಿಧಾನ ಪರಿಷತ್‌ನ ಘನತೆ, ಗೌರವವನ್ನು ಎತ್ತಿ ಹಿಡಿದು ದೇಶದಲ್ಲೇ ಮಾದರಿ ವಿಧಾನ ಪರಿಷತ್ತನ್ನಾಗಿ ಮಾಡಲು ಹಗಲಿರುಳು ಶ್ರಮಿಸುತ್ತೇನೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು. ನಗರದ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಲಿಂಗೈಕ್ಯ ಹಿರಿಯ ಶ್ರೀಗಳಾದ ಡಾ.ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆ ದರ್ಶನ ಪಡೆದು, ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 113 ವರ್ಷಗಳ ಇತಿಹಾಸ ಹೊಂದಿರುವ ಕರ್ನಾಟಕ ವಿಧಾನ ಪರಿಷತ್ ಇಡೀ ದೇಶಕ್ಕೆ ಮಾದರಿಯಾಗಬೇಕಾಗಿದೆ. ಆ ನಿಟ್ಟಿನಲ್ಲಿ ತಾವು ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು. ಮಾಜಿ ಶಾಸಕ ಕೋನರೆಡ್ಡಿ, ವಸಂತ ಹೊರಟ್ಟಿ, ಆರ್. ಶಿವಕುಮಾರ್, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಆರ್.ಸಿ. ಆಂಜಿನಪ್ಪ ಇದ್ದರು.